ವಾರ್ತಾ ಭಾರತಿ

# ಸದನಗಳು ಗರಡಿ ಮನೆಯಾಗುತ್ತಿವೆ

## ಬಸವರಾಜ ಹೊರಟ್ಟಿ

ಬೆಂಗಳೂರು, ಆ.15: 'ಇತ್ತೀಚಿನ ದಿನಗಳಲ್ಲಿ ಸಂಸದೀಯ ವ್ಯವಸ್ಥೆಯ ಮೌಲ್ಯಗಳನ್ನು ಕುಸಿಯುತ್ತಿವೆ ಎಂಬ ಅಪಸ್ವರ ಕೇಳಿಬರುತ್ತಿರುವ ಹಿನ್ನೆಲೆಯಲ್ಲಿ ಎಲ್ಲ ರಾಜಕೀಯ ಪ್ರತಿನಿಧಿಗಳು ಆತ್ಮಾವಲೋಕನ ಮಾಡಿಕೊಳ್ಳುವ ಅಗತ್ಯವಿದೆ' ಎಂದು ವಿಧಾನ ಪರಿಷತ್‌ನ ಸಭಾಪತಿ ಬಸವರಾಜ ಹೊರಟ್ಟಿ ಸಲಹೆ ಮಾಡಿದ್ದಾರೆ.



ರವಿವಾರ ಎಪ್ಪತ್ತೈದನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ವಿಧಾನ ಮಂಡಲದ ವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, 'ನಮ್ಮ ಸದನಗಳು ಮಾತಿನ ಮನೆಯಾಗುವುದಕ್ಕಿಂತ 'ಗರಡಿ ಮನೆ'ಗಳಾಗಿ ಪರಿವರ್ತನೆಯಾಗುತ್ತಿವೆ ಎಂಬುದು ಸಾರ್ವಜನಿಕರ ಅಭಿಪ್ರಾಯ. ಈ ಕುರಿತು ಎಲ್ಲರೂ ಗಂಭೀರವಾಗಿ ಚಿಂತನೆ ಮಾಡುವ ಅಗತ್ಯವಿದೆ' ಎಂದು ಪ್ರತಿಪಾದಿಸಿದರು.

'ಇತ್ತೀಚಿನ ದಿನಗಳಲ್ಲಿ ನೈತಿಕ ತತ್ವ, ಸಿದ್ಧಾಂತಗಳು, ಮಾನವೀಯ ಮೌಲ್ಯಗಳು ಮರೆಯಾಗುತ್ತಿವೆ. ಇವುಗಳ ಮರು ಸ್ಥಾಪನೆಯ ಬಗ್ಗೆ ಗಂಭೀರವಾಗಿ ಚಿಂತಿಸುವ ಅವಶ್ಯಕತೆ ಇದೆ. ಆ ಮೂಲಕ ಸಂಸದೀಯ ಪ್ರಜಾತಂತ್ರ ವ್ಯವಸ್ಥೆಯ ಘನತೆ, ಗೌರವ ಎತ್ತಿಹಿಡಿಯುವ ನಿಟ್ಟಿನಲ್ಲಿ ಎಲ್ಲ ಹಂತದ ಜನಪ್ರತಿನಿಗಳು, ಸಮಾಜ ಸೇವಕರು ಮುಂದಾಗಿ ಸಂಸದೀಯ ವ್ಯವಸ್ಥೆಯಲ್ಲಿ ಸತ್ಸಂಪ್ರದಾಯ ಪಾಲಿಸಬೇಕಾಗಿದೆ' ಎಂದು ಬಸವರಾಜ ಹೊರಟ್ಟಿ ಸೂಚನೆ ನೀಡಿದರು.

ಕೋವಿಡ್ ಮೂರನೇ ಅಲೆಯ ಭೀತಿಯಲ್ಲಿ ನಾವಿದ್ದು, ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವ ಮೂಲಕ ಕೋವಿಡ್ ವಿರುದ್ಧದ ಹೋರಾಟದಲ್ಲಿ ಯಶಸ್ವಿಯಾಗೋಣ ಎಂದ ಅವರು, ರಾಜ್ಯದಲ್ಲಿ ಅತಿವೃಷ್ಟಿ, ಪ್ರವಾಹ ಪರಿಸ್ಥಿತಿಯಂತಹ ಸವಾಲುಗಳ ಸಮರ್ಪಕ ನಿರ್ವಹಣೆಯೊಂದಿಗೆ ಜನಸಾಮಾನ್ಯರ ಕಲ್ಯಾಣಕ್ಕಾಗಿ ರಾಜ್ಯ ಹಾಗೂ ಕೇಂದ್ರ ಸರಕಾರಗಳ ಯೋಜನೆಯ ಲಾಭ ಅರ್ಹರಿಗೆ ತಲುಪಿಸುವಲ್ಲಿ ಪ್ರತಿಯೊಬ್ಬರ ಸಹಕಾರ ಅಗತ್ಯ' ಎಂದು ಅವರು

Bengaluru Edition
Aug 16, 2021 Page No.8

ಜನದನಿಯ ಸಾರಥಿ
ವಾರ್ತಾ ಭಾರತಿ

# ‘ಜನಪ್ರಿಯವಾಗುವುದಕ್ಕಿಂತ ಜನೋಪಯೋಗಿ ಆಗುವುದು ಬಹಳ ಮುಖ್ಯ’



ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವ

ಬೆಂಗಳೂರು, ಆ. 15: ‘ಜನಪ್ರಿಯವಾಗುವುದು ಸುಲಭ. ಜನಪ್ರಿಯವಾಗುವುದಕ್ಕಿಂತ ಜನೋಪಯೋಗಿ ಆಗುವುದು ಬಹಳ ಮುಖ್ಯ. ಜನೋಪಯೋಗಿ ಆಡಳಿತವನ್ನು ನಾವು ನೀಡಲಿದ್ದೇವೆ. ನನ್ನ ಆಡಳಿತ ಜನಪರ, ಜನರಿಗೋಸ್ಕರ, ದಕ್ಷ ಹಾಗೂ ಪಾರದರ್ಶಕವಾಗಿರುತ್ತದೆ. ಬದಲಾವಣೆಯ ಪರ್ವ ಇದು. ನಾಡನ್ನು ಶ್ರೇಷ್ಠ ರಾಜ್ಯವನ್ನಾಗಿಸೋಣ’ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ರವಿವಾರ ಎಪ್ಪತ್ತೈದನೆ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ವಿಧಾನ ಮಂಡಲದ ವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ‘ನಾಡಿನ ಅನೇಕ ಪ್ರಮುಖರು ಸಾಮಾಜಿಕ ಸಮಾನತೆ, ಸುಭಿಕ್ಷತೆ, ಚರಿತ್ರಾರ್ಹ ತೀರ್ಪುಗಳನ್ನು ಹಾಗೂ ಆಚಾರವಂತ ನಿರ್ದೇಶನಗಳನ್ನು ನೀಡಿದ್ದಾರೆ. ಪ್ರೇರಣಾದಾಯಕ ಇತಿಹಾಸ ನಮ್ಮದು. ಜನಪರ ಆಡಳಿತ, ಅಭಿವೃದ್ಧಿ ನಿಟ್ಟಿನಲ್ಲಿ ಸಿದ್ಧತೆಗಳಾಗುತ್ತಿವೆ. ಇಂದು ಘೋಷಣೆಯಾಗಿರುವ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರೋಣ’ ಎಂದು ಸಂಕಲ್ಪ ಮಾಡಿದರು.

‘ದೇಶಕ್ಕೆ ಸ್ವಾತಂತ್ರ್ಯ ದೊರೆತು 75 ವರ್ಷಗಳಾಗಿವೆ. ದೇಶವೊಂದಕ್ಕೆ 75 ಆದರೆ, ಬಾಲ್ಯವನ್ನು ಮುಗಿಸಿ ಯೌವನಕ್ಕೆ ಕಾಲಿಟ್ಟಂತೆ. ಯೌವನದ ಹೊಸ ಚಿಂತನ, ಹೊಸ ಆಸೆಗಳು, ತುಡಿತ, ಕನಸು, ಸಾಧಿಸುವ ಹಂಬಲವಿರುವ ಘಟ್ಟಕ್ಕೆ ದೇಶ ತಲುಪಿದೆ. ಸ್ವಾತಂತ್ರ್ಯ ಮನುಷ್ಯನ ಸಹಜ ಗುಣಧರ್ಮ. ಬ್ರಿಟಿಷರು ಅಂದು ಅಂಥ ಪ್ರಮುಖ ಗುಣಧರ್ಮವನ್ನು ಹತ್ತಿಕ್ಕಿದ್ದರು ಎಂದರೆ, ಸ್ವಾತಂತ್ರ್ಯ ಪೂರ್ವದ ದೇಶ ಹೇಗಿತ್ತು ಎಂದು ಆಲೋಚಿಸಬೇಕು’ ಎಂದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಮಾತನಾಡಿ, ‘ನೆರೆಯ ರಾಷ್ಟ್ರಗಳಿಂದ ಮಾತ್ರ ಭಯೋತ್ಪಾದಕತೆ ಅಪಾಯವನ್ನು ನಾವು ಎದುರಿಸುತ್ತಿಲ್ಲ. ಆಂತರಿಕವಾಗಿಯೂ ಅಪಾಯವಿದೆ. ನಮ್ಮ ಶಿಕ್ಷಣ ವ್ಯವಸ್ಥೆ ಬದಲಾವಣೆ ಆಗಬೇಕಾಗಿದೆ. ನಾವು ಇನ್ನೂ ಬ್ರಿಟಿಷ್ ಮಾದರಿಯ ಶಿಕ್ಷಣ ವ್ಯವಸ್ಥೆಯನ್ನೇ ಅನುಸರಿಸುತ್ತಿದ್ದೇವೆ. ನಮ್ಮ ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಶಿಕ್ಷಣ ವ್ಯವಸ್ಥೆ ರೂಪಿಸಬೇಕಿದೆ’ ಎಂದು ಸಲಹೆ ಮಾಡಿದರು.

ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ‘ರಾಜಕಾರಣದಲ್ಲಿ ಹೆಚ್ಚುತ್ತಿರುವ ಅಪರಾಧೀಕರಣಕ್ಕೆ ಅಂತ್ಯ ಹಾಡುವ ಮೂಲಕ ಮುಂದಿನ ಪೀಳಿಗೆಯಲ್ಲಿ ರಾಜಕೀಯ ನೈತಿಕತೆ ಹಾಗೂ ಸಾಮಾಜಿಕ ಮೌಲ್ಯಗಳನ್ನು ಬಿತ್ತಬೇಕಿದೆ. ಆ ಮೂಲಕ, ಭಾರತೀಯ ಪ್ರಜಾಪ್ರಭುತ್ವ ವ್ಯವಸ್ಥೆಯ ಪ್ರತಿಷ್ಠೆಯನ್ನು ಎತ್ತಿಹಿಡಿಯುವ ಸಂಕಲ್ಪವನ್ನು ಎಲ್ಲರೂ ಮಾಡಬೇಕಾಗಿದೆ’ ಎಂದು ತಿಳಿಸಿದರು.